# ಟಿಪ್ಪಣಿ

ದಿನಾಂಕ:14.07.2025ರಂದು ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕು ಅಂಬಾರಗೋಡ್ಲು ಮತ್ತು ಕಳಸವಳ್ಳಿ ಗ್ರಾಮಗಳ ಮಧ್ಯೆ ಶರಾವತಿ ನದಿಯ ಹಿನ್ನೀರಿನಲ್ಲಿ 472 ಕೋಟಿ ವೆಚ್ಚದಲ್ಲಿ ನಿರ್ಮಾಣವಾದ ಸೇತುವೆಯ ಉದ್ಘಾಟನಾ ಕಾರ್ಯಕ್ರಮವನ್ನು MORTH & NHAI ರವರು ಆಯೋಜಿಸಿರುತ್ತಾರೆ. ಸದರಿ ಸೇತುವೆಗೆ ಸಂಪೂರ್ಣ ಅನುದಾನವನ್ನು ಕೇಂದ್ರ ಸರ್ಕಾರವೇ ಭರಿಸಿರುತ್ತದೆ. ಹೀಗಾಗಿ ಕಾರ್ಯಕ್ರಮಕ್ಕೆ ಸಂಬಂಧಿಸಿದ ಆಹ್ವಾನ ಪತ್ರಿಕೆಯನ್ನು MORTH & NHAI ಇಲಾಖೆಯವರು ಸಿದ್ಧಪಡಿಸಿದ್ದು, ಜಿಲ್ಲಾಧಿಕಾರಿಗಳ ಕಛೇರಿಗೆ ದಿನಾಂಕ:13.07.2025 ರಂದು ಆಹ್ವಾನ ಪತ್ರಿಕೆಯನ್ನು ತಲುಪಿಸಿರುತ್ತಾರೆ.

ಕರ್ನಾಟಕ ಸರ್ಕಾರದ ಸುತ್ತೋಲೆ ನಂ. ಸಿಆಸುಇ 34 ಹೆಚ್ ಪಿ ಎ 2018(1) ದಿನಾಂಕ:16.04.2019 ರಲ್ಲಿ ರಾಜ್ಯ ಸರ್ಕಾರದ ವತಿಯಿಂದ ಆಯೋಜಿಸುವ ಸಭೆ ಸಮಾರಂಭಗಳಿಗೆ ಪಾಲಿಸಬೇಕಾದ ಶಿಷ್ಟಾಚಾರದ ಕುರಿತು ಸಮಗ್ರ ಸೂಚನೆಗಳನ್ನು ಹೊರಡಿಸಿದ್ದು, ಸದರಿ ಸುತ್ತೋಲೆಯಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾರ್ಯಕ್ರಮ ನಡೆಯುವ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ನಡೆಸಬೇಕೆಂದು ಸೂಚನೆ ನೀಡಲಾಗಿರುತ್ತದೆ. ಆದರೆ ಸದರಿ ಕಾರ್ಯಕ್ರಮವು ಕೇಂದ್ರ ಸರ್ಕಾರದ ವತಿಯಿಂದ ಆಯೋಜಿಸುತ್ತಿರುವ ಕಾರಣ ಸುತ್ತೋಲೆ ನಂ. NH-15017/17(1) /2016 P & M, MORTH, GOI ರಂತೆ ಆಹ್ವಾನ ಪತ್ರಿಕೆಯನ್ನು ಸಿದ್ಧಪಡಿಸಿರುವುದಾಗಿ NHAI ಅಧಿಕಾರಿಗಳು ಈ ಕಛೇರಿಗೆ ಮೌಖಿಕವಾಗಿ ತಿಳಿಸಿರುತ್ತಾರೆ. ಸದರಿ ಸುತ್ತೋಲೆಯಲ್ಲಿ ಕಾರ್ಯಕ್ರಮದ ಉದ್ಘಾಟನೆಯನ್ನು ಕೇಂದ್ರ ಭೂ ಸಾರಿಗೆ ಸಚಿವರ ಮೂಲಕ ನೆರವೇರಿಸಬೇಕೆಂದು ಹಾಗೂ ಕಾರ್ಯಕ್ರಮಕ್ಕೆ ಕಡ್ಡಾಯವಾಗಿ ಸ್ಥಳೀಯ ರಾಜ್ಯಸಭೆ /ಲೋಕಸಭೆ ಸಂಸದರು ಮತ್ತು ಕಾರ್ಯಕ್ರಮ ನಡೆಯುವ ವಿಧಾನಸಭೆಯ ಶಾಸಕರಿಗೆ ಆಹ್ವಾನಿಸಬೇಕೆಂದು ಸೂಚನೆಗಳು ಇರುತ್ತದೆ. ಆದರೆ ಅಧ್ಯಕ್ಷತೆಯನ್ನು ಯಾರು ವಹಿಸಬೇಕೆಂದು ಸದರಿ ಸುತ್ತೋಲೆಯಲ್ಲಿ ತಿಳಿಸಿರುವುದಿಲ್ಲ. ಈ ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ಗಮನಿಸಿದಾಗ ಉದ್ಘಾಟನೆಯನ್ನು ಮಾನ್ಯ ಕೇಂದ್ರ ಭೂಸಾರಿಗೆ ಸಚಿವರ ಮೂಲಕ ಮತ್ತು ಅಧ್ಯಕ್ಷತೆಯನ್ನು ಮಾನ್ಯ ಮುಖ್ಯಮಂತ್ರಿಗಳ ಮೂಲಕ ಮಾಡಲಾಗುವುದಾಗಿ ನಮೂದಿಸಲಾಗಿರುತ್ತದೆ.

ಮುಂದುವರೆದು, ಸ್ಥಳೀಯ ಸಂಸದರು, ವಿಧಾನಸಭೆ ಮತ್ತು ವಿಧಾನ ಪರಿಷತ್ ಶಾಸಕರ ಹೆಸರನ್ನು ನಮೂದಿಸಲಾಗಿರುತ್ತದೆ. ಆದರೆ ಕರ್ನಾಟಕ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಬಿ.ಎಸ್.ಯಡಿಯೂರಪ್ಪ ರವರ ಹೆಸರನ್ನು ಆಧ್ಯತೆ ಪಟ್ಟಿಯ ಪ್ರಕಾರ ಅನುಸರಿಸದೇ ಮಾನ್ಯ ಉಪ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್, ಮಾನ್ಯ ವಿಧಾನಸಭೆಯ ಸಭಾಧ್ಯಕ್ಷರಾದ ಶ್ರೀ ಯು.ಟಿ.ಖಾದರ್ ಮತ್ತು ಮಾನ್ಯ ವಿಧಾನಪರಿಷತ್ ಸಭಾಪತಿಗಳಾದ ಶ್ರೀ ಬಸವರಾಜ್ ಹೊರಟ್ಟಿ ಇವರಿಗಿಂತ ಮೇಲೆ ನಮೂದಿಸಿರುತ್ತಾರೆ.

ಮುಂದುವರೆದು, ರಾಜ್ಯ ಸರ್ಕಾರದ ಸುತ್ತೋಲೆ ನಂ. ಸಿಆಸುಇ20 ಹೆಚ್ ಜಿ ಜಿ 2025 ದಿನಾಂಕ:20.02.2025 ರಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಕಾರ್ಯಕ್ರಮಗಳಿಗೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸುವ ಮೊದಲು ಕಡ್ಡಾಯವಾಗಿ ಸಂಬಂದಪಟ್ಟ ಇಲಾಖೆಯವರು ಸಿಆಸುಇ (ರಾಜ್ಯ ಶಿಷ್ಟಾಚಾರ) ಇಲಾಖೆಯಿಂದ ಪೂರ್ವಾನುಮತಿಯನ್ನು ಪಡೆಯಬೇಕೆಂದು ತಿಳಿಸಲಾಗಿರುತ್ತದೆ. ಆದರೆ NHAI ಅಧಿಕಾರಿಗಳು ಸಿಆಸುಇ ಇಲಾಖೆಯಿಂದ ಪೂರ್ವಾನುಮತಿಯನ್ನು ಪಡೆದಿರುವುದರ ಬಗ್ಗೆ ಯಾವುದೇ ದಾಖಲೆಯನ್ನು ಜಿಲ್ಲಾಧಿಕಾರಿಗಳ ಕಛೇರಿಗೆ ಸಲ್ಲಿಸಿರುವುದಿಲ್ಲ ಮತ್ತು ಜಿಲ್ಲಾಧಿಕಾರಿಗಳ ಕಛೇರಿಯಿಂದ ಸದರಿ ಆಹ್ವಾನ ಪತ್ರಿಕೆಗೆ ಯಾವುದೇ ಅನುಮತಿಯನ್ನು ಸಹ ನೀಡಿರುವುದಿಲ್ಲ. ಅದಲ್ಲದೇ ಸದರಿ ಉದ್ಘಾಟನೆ ಕಾರ್ಯಕ್ರಮವನ್ನು ಸಾಗರ ನಗರದ ನೆಹರೂ ಮೈದನಾದಲ್ಲಿ ಆಯೋಜಿಸಿದ್ದು ಕಾರ್ಯಕ್ರಮ ವೇದಿಕೆಗೆ ಆಗಮಿಸುವ ಗಣ್ಯರ ಪಟ್ಟಿ ಮತ್ತು ಆಸನದ ವ್ಯವಸ್ಥೆಯ ಬಗ್ಗೆ ಮತ್ತು ಗಣ್ಯರು ಆಗಮಿಸಿದಾಗ ಅವರನ್ನು ಸ್ವಾಗತಿಸಲು ಹಾಜರಿರುವ ವ್ಯಕ್ತಿಗಳ ವಿವರವನ್ನು ಸಹ ಸಿಆಸುಇ ಇಲಾಖೆಯಿಂದಾಗಲೀ ಅಥವಾ ಜಿಲ್ಲಾಡಳಿತದಿಂದಾಗಲೀ ಅನುಮತಿಯನ್ನು ಪಡೆದಿರುವುದಿಲ್ಲ ಎಂಬ ಅಂಶವನ್ನು ಅವಗಾಹನೆಗೆ ಸಲ್ಲಿಸಿದೆ.

6.75 x 9.75 inch

National Highways Authority of India
(www.nhai.gov.in)

Ministry of Road Transport & Highways, Government of India
(www.morth.nic.in)

# Invitation

**Secretary**
Ministry of Road Transport and Highways, Govt. of India
and
**Chairman**
National Highways Authority of India

*Cordially invite you for*

**FOUNDATION STONE LAYING & DEDICATION TO THE NATION OF 9 NATIONAL HIGHWAY PROJECTS OF TOTAL LENGTH 88 kM WITH AN INVESTMENT OF MORE THAN ₹ 2000 CRORE**

**Date :** Monday, 14th July 2025
**Time :** 2 pm
**Venue :** Nehru Field, Sagara Town, Sagara Taluk, Shivamogga



6.75 x 9.75 inch

## DEDICATION TO THE NATION

Major Bridge across Sharavathi Backwaters between Ambargodu and Kalasavalli of NH-369E
**Length :** 6 Km I ₹ 472 Cr.

2/4 lane + PS of Bidar-Humnabad stretch of NH 50
**Length :** 47 Km I ₹ 345 Cr.

2 lane + PS from Bhanapur-Gaddanakeri Stretch on NH 367
**Length :** 25 Km I ₹ 173 Cr.

4 lane ROB & 2 lane Major Bridge in Kalburgi - Yadgiri Stretch of NH-150
**Length :** 3 Km I ₹ 65 Cr.

7 Minor Bridges from Mani - Sampaji on NH 275
**Length :** 3 Km I ₹ 52 Cr.

Permanent restoration work in Shiradi Ghat of NH-75
₹ 41 Cr.

## FOUNDATION STONE LAYING

Additional Works to ensure Road Safety for 6-lane Bangalore-Mysore Access-controlled section of NH-275
**Length :** 2 Km I ₹ 712 Cr.

Construction of Retaining wall from Sampaje to Kushalnagara on NH-275
**Length :** 2 Km I ₹ 94 Cr.

4 lane ROB at Wadi on NH 150
₹ 88 Cr.

Presided By
**Shri. Siddaramaiah**
Chief Minister of Karnataka

By
**Shri. Nitin Gadkari**
Minister of Road Transport & Highways, Govt. of India

### Guest of Honour

**Shri H. D. Devegowda**
Former Prime Minister of India
Member of Rajya Sabha

**Shri H. D. Kumaraswamy**
Union Minister of Heavy Industries and Public Enterprises

**Km. Shobha Karandlaje**
Union Minister of State in Ministry of Labour and Employment and Ministry of Micro Small and Medium Enterprises

**Shri U. T. Khader**
Speaker of Karnataka Legislative Assembly

**Shri K. N. Rajanna**
Minister of Co-operation and District Incharge Minister, Hassan
Govt of Karnataka

**Shri. Priyank M. Kharge**
Minister of Rural Development and Panchayatraj and ITBT and Dist incharge, Kalaburagi
Govt of Karnataka

**Dr Mallikarjun Kharge**
Leader of the Opposition in Rajya Sabha & MP (RS)

**Shri. B.S. Yediyurappa**
Former Chief Minister Govt of Karnataka

**Shri D. K. Shivakumar**
Deputy Chief Minister of Karnataka
Minister of Major Irrigation

**Shri Satish Jarkiholi**
Minister of Public Works Department Govt of Karnataka

**Shri. Eshwar Khandre**
Minister for Forest, Ecology and Environment, and Dist incharge min Bidar
Govt of Karnataka

**Shri. Rahim Khan**
Minister For Municipal Administration and Hajj
Govt of Karnataka Govt of Karnataka

**Shri Pralhad Joshi**
Union Minister of Consumer Affairs Food and Public Distribution

**Shri V. Somanna**
Union Minister of State in the Ministry of Railways and Ministry of Jalashakthi

**Shri. Basavaraj Horatti**
Speaker of Karnataka legislative Council

**Shri Dinesh Gundu Rao**
Minister of Health and Family Welfare and District Incharge Minister, Dakshina Kannada Govt of Karnataka

**Dr. Sharan Prakash Patil**
Minister of Medical Education & Skill Development , Karnataka
Govt of Karnataka

**Shri. N.S. Boseraju**
Minister for Minor irrigation Science and Technology Govt of Karnataka

**Shri S Madhu Bangarappa**
Minister for School Education and Literacy and Shivamogga District In-charge Minister, Govt of Karnataka

6.75 x 9.75 inch

**Shri K. M. Shivalinge Gowda**
Chairman of Karnataka Housing Board
Govt of Karnataka

**Shri Basavaraj Rayareddy**
Economic Advisor of CM Govt of Karnataka

**Shri B K Sangameshwara**
Chairman, Karnataka Rural Infrastructure
Development Limited (KRIDL), Govt of Karnataka

**Shri Belur Gopalkrishna**
MLA Sagara Chairman, Karnataka
Forest Industries Corporation Ltd.
Govt of Karnataka

**Shri. Kagodu Thimappa**
Former Speaker, Karnataka

## Hon'ble Members of Parliament

**Shri B.Y. Raghavendra** | **Shri Shreyas M Patel** | **Shri Captain Brijesh Chowta**

**Shri D Veerendra Heggade** | **Shri Sagar E. Khandre** | **Shri Radhakrishna Doddamani**

**Shri Basavaraj S Bommai** | **Shri K. Rajashekar Basavaraj Hitnal** | **Shri Narayanasa K. Bhandage**

**Shri Yadhuveer Krishnadatta Chamaraja Odeyar** | **Shri Ajay Makan** | **Dr. C. N. Manjunath Shri**

## Hon'ble Members of Legislative Council

**Dr. Chandrasekhar B. Patil** | **Shri Shashil G. Namoshi** | **Shri Bhimrao B. Patil** | **Dr. M.G. Mule**

**Shri Ivon D' Souza** | **Shri Pratapsimha Nayak** | **Shri Manjunath Bhandary** | **Shri Dhananjay Sarji**

**Shri Kishore kumar B R** | **Shri S. L. Bhojegowda** | **Shri D. S. Arun** | **Smt. Bharati Shetty**

**Smt. Balkees Banu** | **Dr. Suraj Revanna** | **Shri K.Vivekananda** | **Shri Saleem Ahmed**

**Shri Pradeep Shettar** | **Shri S. V. Sankanur** | **Shri Sharanagouda Annadanagouda Patil Bayyapur**

**Smt. Hemalatha Nayak** | **Shri B. G. Patil** | **Shri Jagadev Guttedar** | **Shri Tippannappa Kamaknur**

**Shri Sunil Vallyapure** | **Dr. Talwar Sabanna** | **Shri. Suja Kushalappa** | **Shri H. M. Revanna**

**Shri S. Ravi** | **Shri Puttanna** | **Shri C. M. Lingappa** | **Shri A Devegowda** | **Shri Marithibbe Gowda**

**Shri Dinesh Gooligowda** | **Shri Gopinath Reddy** | **Shri. Madhu G. Madegowda** | **Shri K. T. Srikantegowda**

6.75 x 9.75 inch

## Hon'ble Members of Legislative Assembly

Shri Cement Manju | Shri Shailendra K. Beldale | Dr. Siddalingappa Patil | Shri Basawaraj Mattimud

Shri Ashok Kumar Rai | Ku. Bhagirathi Murulya | Shri Araga Jnanendra | Shri S. N. Channabasappa

Smt. Sharada Purya Naik | Shri B.Y. Vijayendra | Shri Doddanagouda Hanamagouda Patil

Shri G S Patil | Shri G. T. Devegowda | Shri E. S. Ponnanna | Dr. Manthargowda

Shri S. T. Somashekara | Shri H. C. Balakrishna | Shri H. A. Iqbal Hussain | Shri C. P. Yogeshwara

Sri K. M. Udaya | Shri Ravikumar Gowda Ganiga | Sri A. B. Ramesha Bandisiddegowda

www.morth.nic.in
www.nhai.gov.in

FOR LIVE STREAMING :
www.facebook.com/nitingadkary
https://twitter.com/nitin_gadkari
www.youtube.com/c/NitinGadkariOfficial



# ಕರ್ನಾಟಕ ಸರ್ಕಾರ

**ಸಂಖ್ಯೆ:**ಸಿಆಸುಇ 20 ಹೆಚ್‌ಜಿಜಿ 2025

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:20.02.2025

## ಸುತ್ತೋಲೆ

**ವಿಷಯ:** ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಕಾರ್ಯಕ್ರಮಗಳ ಆಹ್ವಾನ ಪತ್ರಿಕೆಗಳನ್ನು ಮುದ್ರಿಸುವ ಕುರಿತು ಸೂಚನೆಗಳನ್ನು ನೀಡುವ ಬಗ್ಗೆ.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರದ ವತಿಯಿಂದ ಆಯೋಜಿಸಲ್ಪಡುವ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಕಾರ್ಯಕ್ರಮಗಳ ಆಹ್ವಾನ ಪತ್ರಿಕೆಗಳಲ್ಲಿ ಆಹ್ವಾನಿತರ ಹೆಸರುಗಳನ್ನು ಮುದ್ರಿಸುವಲ್ಲಿ ಸೂಕ್ತ ಶಿಷ್ಟಾಚಾರ ಪಾಲನೆಯಾಗಿರುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜ್ಯ ಶಿಷ್ಟಾಚಾರ) ಯಿಂದ ಕಡ್ಡಾಯವಾಗಿ ಪೂರ್ವಾನುಮೋದನೆಯನ್ನು ಪಡೆದು ಮುಂದಿನ ಕ್ರಮವಹಿಸುವಂತೆ ಈ ಮೂಲಕ ಸೂಚಿಸಿದೆ.

20/2/2025

**(ಎಲಿಷ ಆಂಡ್ರೂಸ್)**
ಸರ್ಕಾರದ ಉಪ ಕಾರ್ಯದರ್ಶಿ
ಸಿಆಸುಇ (ರಾಜ್ಯ ಶಿಷ್ಟಾಚಾರ)
(Email Id:stateprotocolofficer@gmail.com)
(Contact No: 080-2203321)

20/02

**ಪ್ರತಿಗಳು:**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2. ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6. ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ) ಸಿಆಸುಇ (ರಾಜ್ಯ ಶಿಷ್ಟಾಚಾರ) ವಿಧಾನಸೌಧ, ಬೆಂಗಳೂರು (Gmail Id: undersecretary1protocol@gmail.com) (Contact No: 080-2203270/3038)

No. NH-15017/17(1)/2016-P&M
Government of India
**Ministry of Road Transport & Highways**
**(P&M zone)**

Transport Bhawan
1,Parliament Street
New Delhi dated 16th June, 2016

To

All Secretaries of States/Union Territories, PWDs dealing with National Highways.

Subject:- **Inauguration/Bhoomi Pujan Foundation Stone Laying/Any other ceremony in respect of National Highway works.**

Please refer to this Ministry's letter No.RW/NH-33044/10/2003-S&R(R) dated 16th December, 2011 on the subject of Inauguration/Bhoomi Pujan/Foundation Stone Laying/Any other ceremony in respect of National Highway works. The matter has been reviewed and following consolidated instructions in supersession of earlier circular on the subject are issued:

**Inauguration/Bhoomi Pujan Foundation Stone Laying/Any other ceremony in respect of National Highway works:**

As the National Highways vest in theCentral Government, all ceremonial functions like Inauguration/Bhoomi Pujan Foundation Stone Laying etc. relating to National Highways will be done by the Hon'ble Minister, MoRT&H/Hon'ble Minister of State, RT&H, or a Minister from the Central Government, as decided by the MoRT&H. It is therefore, incumbent on the part of the executing agencies to intimate the Government of India three months in advance about the likely start/completion of any work for holding Bhoomi Pujan/Inauguration/Foundation Stone Laying/any other ceremony for National Highway Works. For this purpose following procedure shall be followed:-

(a) When the Bhoomi Pujan/Inaguration/Foundation Stone Laying/any other ceremony for any other National Highway work is to be held, the State Chief Engineer (NH) will make a report well in advance (copy of the request should be endorsed to Regional Officer/Engineer Liaison Officer) about it to this Ministry, who will take a decision about the date of the ceremony as well as dignitary who would perform the function.

(b) The Chief Engineer of this Ministry, dealing with the concerned project, will be the 'nodal officer' for finalization of invitation card, programme, plaque and advertisement by the Ministry. He will also coordinate with the State Government/Chief Engineer regarding the function.

(c) Detailed programme of this function and the advertisement to be issued on such occasion shall be made by the concerned Chief Engineer of the Ministry.

(d) Invitation card shall be issued on behalf of the Government of India, Ministry of Road Transport and Highways. Formats for invitation card and plaque shall be in accordance with the formats provided in Ministry's letter No.RW/NH/3304/10/2003/S&R(R) dated 13th May, 2003.

(e) Such public functions shall be used as forums for spreading awareness on road safety matter and educating the general public about best practices on road safety, helping accident victims, trauma care facilities, etc. in addition, information on environmental damage mitigation, construction hazard reduction, socio-economic benefit, etc. may be disseminated to increase public awareness, public safety and public cooperation about the development program.

(f) For incurring expenditure for Inauguration/Bhoomi Pujan Foundation Stone Laying/Any other ceremony in respect of National Highway works, the directions issued vide Ministry's circular No. NH-15017/17(2)/2016-P&M dated 16th June, 2016 may be followed.

(g) Due to courtesy in order of protocol shall be ensure in extending the invitations on the dignitaries in the following order:-

i. Member of Parliament (Lok Sabha) representing the spot where function is being held.
ii. Member of Legislative Assembly representing the spot where function is being held.
iii. Member of Parliament (Rajya Sabha) representing the spot where function is being held.
iv. Other invitees may be decided by MoRT&H.

3. This may please be brought to the notice of all concerned for strict compliance.

**Yours faithfully,**

**(Maya Prakash)**
**Director (P&B)**
**Tel. No. 011-23710454**

Copy to:-

1. All Technical Officers in the Ministry of Road Transport and Highways
2. All Section Officers in the Ministry of Road Transport and Highways
3. All ROs and ELOs
4. Chairman-NHAI
5. AS&FA
6. MD-NHIDCL
7. JS(H)/JS(T)
8. The Director-IAHE/Secretary General-IRC
9. Technical circular file of S&R Division

**Copy also forwarded for information to:-**

1. PS to Hon'ble Minister (RT&H,S)
2. PS to Hon'ble Minister of State (RTH&S)
3. PPS to Secretary (RT&H)
4. PPS to JS(LAP)

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 34 ಹೆಚ್‌ಪಿಎ 2018(1)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು ದಿನಾಂಕ: 16.04.2019.

## ಸು ತ್ತೋ ಲೆ

ವಿಷಯ: ಸರ್ಕಾರದ ಸಭೆ ಸಮಾರಂಭಗಳ ಆಯೋಜನೆಯಲ್ಲಿ ಪಾಲಿಸಬೇಕಾದ ಶಿಷ್ಟಾಚಾರ ಕುರಿತು ಸಮಗ್ರ ಸೂಚನೆಗಳನ್ನು ಹೊರಡಿಸುವ ಕುರಿತು.

******

ಸರ್ಕಾರಿ ಸಭೆ ಮತ್ತು ಸಮಾರಂಭಗಳಿಗೆ ಜನ ಪ್ರತಿನಿಧಿಗಳನ್ನು ಆಹ್ವಾನಿಸುವಲ್ಲಿ ಅನುಸರಿಸಬೇಕಾದ ಶಿಷ್ಟಾಚಾರದ ಕುರಿತು ಈಗಾಗಲೇ ಸಮಗ್ರವಾದ ಸುತ್ತೋಲೆ ಸಂಖ್ಯೆ: ಸಿಆಸುಇ 34 ಹೆಚ್‌ಪಿಎ 2018 (1) ದಿನಾಂಕ: 06.03.2019ರಡಿ ಹೊರಡಿಸಲಾಗಿದೆ. ಸದರಿ ಸುತ್ತೋಲೆಗೆ ಕೆಲವೊಂದು ಅಂಶಗಳನ್ನು ಸೇರಿಸಬೇಕಾಗಿರುವುದರಿಂದ, ಈ ಪರಿಷ್ಕೃತ ಸುತ್ತೋಲೆಯನ್ನು ಹೊರಡಿಸಿದೆ. ಹೊಸದಾಗಿ ಸೇರಿಸಿದ ಅಂಶಗಳನ್ನು ಅನುಕ್ರಮ ಸಂಖ್ಯೆ 11ರ ಕೆಳಗಡೆ ದಪ್ಪ ಅಕ್ಷರಗಳಿಂದ ನಮೂದಿಸಿದೆ.

## ಸಾಮಾನ್ಯ ಸೂಚನೆಗಳು

1. ಈ ಸೂಚನೆಗಳು ರಾಜ್ಯ ಸರ್ಕಾರದ ವತಿಯಿಂದ ನಡೆಸುವ ರಾಜ್ಯ / ಜಿಲ್ಲಾ / ತಾಲ್ಲೂಕು ಮಟ್ಟದ ಸಮಾರಂಭಗಳಿಗೆ ಮತ್ತು ರಾಜ್ಯದ ಧನ ಸಹಾಯದಿಂದ ಸ್ಥಾಪಿಸಲ್ಪಟ್ಟ ರಾಜ್ಯ ಮಟ್ಟದ ಸಹಕಾರಿ ಸಂಘಗಳು ಹಾಗೂ ಸರ್ಕಾರದ ಸ್ವಾಮ್ಯಕ್ಕೊಳಪಡುವ ಎಲ್ಲಾ ಸಂಸ್ಥೆಗಳು ನಡೆಸುವ ಕಾರ್ಯಕ್ರಮಗಳಿಗೆ ಅನ್ವಯಿಸುತ್ತವೆ.

2. ಜಿಲ್ಲಾ ಉಸ್ತುವಾರಿ ಸಚಿವರು, ಸ್ಥಳೀಯ ಶಾಸಕರು ಒಳಗೊಂಡಂತೆ ಸರ್ಕಾರದ ಆ ಇಲಾಖೆಯ ಅಧಿಕೃತ ಕಾರ್ಯಕ್ರಮಗಳಿಗೆ, ಸಂಬಂಧಪಟ್ಟ ಇಲಾಖೆಯ ಸಚಿವರ ಸಮಾಲೋಚನೆಯೊಂದಿಗೆ ನಿಗದಿಪಡಿಸಿ ಕಾರ್ಯಕ್ರಮವನ್ನು ಏರ್ಪಡಿಸತಕ್ಕದ್ದು.

3. ಸರ್ಕಾರಿ ಕಾರ್ಯಾಕ್ರಮವನ್ನು ನಡೆಸಲು ಕನಿಷ್ಟ ಪಕ್ಷ 7 ದಿವಸಗಳ ಸಮಯಾವಕಾಶವನ್ನು ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಕೋರುವುದು.

4. **ಸಂಬಂಧಿಸಿದ ಇಲಾಖೆಯ ಅಧಿಕಾರಿಗಳ ಬದಲಾಗಿ ಜನಪ್ರತಿನಿದಿಗಳು ಹಾಗೂ ಸಾರ್ವಜನಿಕರೇ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಸರ್ಕಾರಿ ಸಮಾರಂಭಗಳನ್ನು ಏರ್ಪಡಿಸಬಾರದು.**

5. **ಯಾವುದೇ ಸರ್ಕಾರಿ ಸಭೆ ಅಥವಾ ಕಾರ್ಯಕ್ರಮವನ್ನು ಖಾಸಗಿ ನಿವಾಸದಲ್ಲಿ ಏರ್ಪಡಿಸುವಂತಿಲ್ಲ.**



Scanned with CamScanner

## ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವ ಬಗ್ಗೆ

6 ಸರ್ಕಾರದ ಯಾವುದೇ ಕಾರ್ಯಕ್ರಮವಾಗಿದ್ದರೂ ಸಾಮಾನ್ಯವಾಗಿ ಕಾರ್ಯಕ್ರಮ ನಡೆಯುವ ಸ್ಥಳದ ವ್ಯಾಪ್ತಿಗೊಳಪಡುವ ವಿಧಾನ ಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿಯೇ ಕಾರ್ಯಕ್ರಮ ನಡೆಸುವುದು. ಆದರೆ ಕೆಲವೊಂದು ಸಂದರ್ಭದಲ್ಲಿ ಒಂದು ವಿಧಾನಸಭಾ ಕ್ಷೇತ್ರದ ಸ್ಥಳೀಯ ಕಾರ್ಯಕ್ರಮವನ್ನು ಸದರಿ ವಿಧಾನಸಭಾ ಕ್ಷೇತ್ರದ ಹೋಬಳಿ/ಪ್ರದೇಶವಿರುವ ತಾಲ್ಲೂಕಿನ ಕೇಂದ್ರ ಸ್ಥಾನದಲ್ಲಿ ಆಯೋಜಿಸಿದಾಗ, ಸದರಿ ತಾಲ್ಲೂಕು ಕೇಂದ್ರ ಸ್ಥಾನವು ಇನ್ನೊಂದು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿದ್ದರೂ ಸಹ ಅಂತಹ ಕಾರ್ಯಕ್ರಮಗಳಲ್ಲಿ, ಕಾರ್ಯಕ್ರಮವು ಯಾವ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಿರುತ್ತದೆಯೋ ಆ ಸಂಬಂಧಪಟ್ಟ ಶಾಸಕರು ಅಧ್ಯಕ್ಷತೆಯನ್ನು ವಹಿಸುವುದು.

7. ಕೆಲವೊಮ್ಮೆ ಕಾರಣಾಂತರಗಳಿಂದ ವಿಧಾನಸಭಾ ಸದಸ್ಯರ ಸ್ಥಾನವು ತೆರವಾದ ಸಂದರ್ಭದಲ್ಲಿ ಸರ್ಕಾರಿ ಕಾರ್ಯಕ್ರಮಗಳ ಅಧ್ಯಕ್ಷತೆಯನ್ನು ಕೆಳಕಂಡಂತೆ ವಹಿಸುವುದು.

   i. ಸರ್ಕಾರಿ ಕಾರ್ಯಕ್ರಮಗಳನ್ನು ಮಾನ್ಯ ಮುಖ್ಯ ಮಂತ್ರಿಯವರು ಉದ್ಘಾಟಿಸಿದಾಗ ಜಿಲ್ಲಾ ಸಚಿವರು ಅಧ್ಯಕ್ಷತೆಯನ್ನು ವಹಿಸುವುದು.

   ii. ಸಂಬಂಧಪಟ್ಟ ಜಿಲ್ಲಾ ಸಚಿವರು ಉದ್ಘಾಟಿಸಿದಾಗ ಇಲಾಖಾ ಸಚಿವರು ಅಧ್ಯಕ್ಷತೆಯನ್ನು ವಹಿಸುವುದು.

   iii. ಜಿಲ್ಲಾ ಸಚಿವರು ಸರ್ಕಾರಿ ಕಾರ್ಯಕ್ರಮಗಳನ್ನು ಉದ್ಘಾಟಿಸಿದಾಗ, ಇಲಾಖಾ ಸಚಿವರು ಹಾಜರಾಗದೇ ಇರುವ ಸಂದರ್ಭಗಳಲ್ಲಿ, ಜಿಲ್ಲಾ ಸಚಿವರೇ ಅಧ್ಯಕ್ಷತೆಯನ್ನು ಸಹ ವಹಿಸುವುದು.

## ಕಾರ್ಯಕ್ರಮಕ್ಕೆ ಆಹ್ವಾನಿಸುವ ಬಗ್ಗೆ

8 ಕಾರ್ಯಕ್ರಮಕ್ಕನುಗುಣವಾಗಿ ಈ ಕೆಳಕಂಡಂತೆ ಜನಪ್ರತಿನಿಧಿಗಳನ್ನು ಕಡ್ಡಾಯವಾಗಿ ಆಹ್ವಾನಿಸಬೇಕೆಂದು ಸೂಚಿಸಿದೆ.

**ತಾಲ್ಲೂಕು ಮಟ್ಟದ ಕಾರ್ಯಕ್ರಮ:**

- ಜಿಲ್ಲಾ ಉಸ್ತುವಾರಿ ಸಚಿವರುಗಳು,
- ಕಾರ್ಯಕ್ರಮಕ್ಕೆ ಸಂಬಂಧಪಟ್ಟ ಇಲಾಖಾ ಸಚಿವರು.
- ಸಂಬಂಧಪಟ್ಟ ಕ್ಷೇತ್ರದ ವಿಧಾನ ಸಭಾ ಕ್ಷೇತ್ರದ ಶಾಸಕರು (ಅಧ್ಯಕ್ಷತೆ)
- ತಾಲ್ಲೂಕನ್ನು ಪ್ರತಿನಿಧಿಸುವ ಸಂಸದರು (ಆ ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡಿರುವ ರಾಜ್ಯಸಭಾ ಸದಸ್ಯರು ಸೇರಿದಂತೆ).



Scanned with CamScanner

- ತಾಲ್ಲೂಕನ್ನು ಪ್ರತಿನಿಧಿಸುವ ಪದವೀದರ ಕ್ಷೇತ್ರ, ಶಿಕ್ಷಕರ ಕ್ಷೇತ್ರ ಮತ್ತು ಸ್ಥಳೀಯ ಸಂಸ್ಥೆಗಳ ಕ್ಷೇತ್ರದ ವಿಧಾನ ಪರಿಷತ್ತಿನ ಎಲ್ಲಾ ಶಾಸಕರುಗಳು ಮತ್ತು ನೋಡಲ್ ತಾಲ್ಲೂಕಾಗಿ ಆಯ್ಕೆ ಮಾಡಿಕೊಂಡಿರುವ ನಾಮ ನಿರ್ದೇಶಿತ ಹಾಗೂ ವಿಧಾನಸಭೆಯಿಂದ ಆಯ್ಕೆಯಾದ ವಿಧಾನ ಪರಿಷತ್ತಿನ ಶಾಸಕರುಗಳು.
- ನಿಗಮ ಮತ್ತು ಮಂಡಳಿಗಳ ಕಾರ್ಯಕ್ರಮಗಳಿಗೆ ಆಯಾ ನಿಗಮ ಮತ್ತು ಮಂಡಳಿಯ ಅಧ್ಯಕ್ಷರುಗಳನ್ನು ಆಹ್ವಾನಿಸುವುದು. ಜೊತೆಗೆ ಇತರೇ ಕಾರ್ಯಕ್ರಮಗಳಿಗೆ ಆಯಾ ತಾಲ್ಲೂಕುಗಳಿಂದ ನಿಗಮ ಮತ್ತು ಮಂಡಳಿಗಳಿಗೆ ಅಧ್ಯಕ್ಷರುಗಳಾಗಿರುವವರನ್ನು ಸಹ ಆಹ್ವಾನಿಸುವುದು.
- ಜಿಲ್ಲಾ ಪಂಚಾಯತ್ ಅಧ್ಯಕ್ಷರು
- ತಾಲ್ಲೂಕು ಪಂಚಾಯತ್ ಅಧ್ಯಕ್ಷರು
- ಕಾರ್ಯಕ್ರಮ ನಡೆಯುವ ಸ್ಥಳದ ನಗರ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು/ ಮಹಾಪೌರರು ಅಥವಾ ಗ್ರಾಮ ಪಂಚಾಯಿತಿಯ ಅಧ್ಯಕ್ಷರು.

**ಜಿಲ್ಲಾ ಮಟ್ಟದ ಕಾರ್ಯಕ್ರಮ:**

- ಜಿಲ್ಲಾ ಉಸ್ತುವಾರಿ ಸಚಿವರುಗಳು.
- ಜಿಲ್ಲೆಯ ಇತರೆ ಸಚಿವರುಗಳು.
- ಕಾರ್ಯಕ್ರಮಕ್ಕೆ ಸಂಬಂಧಪಟ್ಟ ಇಲಾಖಾ ಸಚಿವರು.
- ಜಿಲ್ಲೆಯ ಎಲ್ಲಾ ವಿಧಾನ ಸಭಾ ಸದಸ್ಯರುಗಳು (ಕಾರ್ಯಕ್ರಮ ನಡೆಯುವ ಸ್ಥಳದ ವ್ಯಾಪ್ತಿಯ ಶಾಸಕರ ಅಧ್ಯಕ್ಷತೆ.
- ಜಿಲ್ಲೆಯ ಎಲ್ಲಾ ಸಂಸದರು (ಜಿಲ್ಲೆಯನ್ನು ನೋಡಲ್ ಜಿಲ್ಲೆಯನ್ನಾಗಿ ಆಯ್ಕೆ ಮಾಡಿಕೊಂಡಿರುವ ರಾಜ್ಯ ಸಭಾ ಸದಸ್ಯರು ಸೇರಿದಂತೆ)
- ಜಿಲ್ಲೆಯನ್ನು ಪ್ರತಿನಿಧಿಸುವ ಪದವೀದರ ಕ್ಷೇತ್ರ, ಶಿಕ್ಷಕರ ಕ್ಷೇತ್ರ ಮತ್ತು ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳಿಂದ ಚುನಾಯಿತರಾಗಿರುವ ವಿಧಾನ ಪರಿಷತ್ತಿನ ಎಲ್ಲಾ ಶಾಸಕರುಗಳು ಮತ್ತು ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿಕೊಂಡಿರುವ ನಾಮ ನಿರ್ದೇಶಿತ ಹಾಗೂ ವಿಧಾನಸಭೆಯಿಂದ ಆಯ್ಕೆಯಾದ ವಿಧಾನ ಪರಿಷತ್ತಿನ ಶಾಸಕರುಗಳು
- ನಿಗಮ ಮತ್ತು ಮಂಡಳಿಗಳ ಕಾರ್ಯಕ್ರಮಗಳಿಗೆ ಆಯಾ ನಿಗಮ ಮತ್ತು ಮಂಡಳಿಯ ಅಧ್ಯಕ್ಷರುಗಳನ್ನು ಆಹ್ವಾನಿಸುವುದು. ಜೊತೆಗೆ ಇತರೇ ಕಾರ್ಯಕ್ರಮಗಳಿಗೆ ಆಯಾ ಜಿಲ್ಲೆಗಳಿಂದ ನಿಗಮ ಮತ್ತು ಮಂಡಳಿಗಳಿಗೆ ಅಧ್ಯಕ್ಷರುಗಳಾಗಿರುವವರನ್ನು ಸಹ ಆಹ್ವಾನಿಸುವುದು.
- ಜಿಲ್ಲಾ ಪಂಚಾಯತ್ ಅಧ್ಯಕ್ಷರು.
- ಕಾರ್ಯಕ್ರಮ ನಡೆಯುವ ಸ್ಥಳದ ತಾಲ್ಲೂಕು ಪಂಚಾಯತ್ ಅಧ್ಯಕ್ಷರು
- ಕಾರ್ಯಕ್ರಮ ನಡೆಯುವ ಸ್ಥಳದ ನಗರ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು/ ಮಹಾಪೌರರು ಅಥವಾ ಗ್ರಾಮ ಪಂಚಾಯಿತಿಯ ಅಧ್ಯಕ್ಷರು.



Scanned with CamScanner

ರಾಜ್ಯ ಮಟ್ಟದ ಕಾರ್ಯಕ್ರಮ:

- ಮಾನ್ಯ ಮುಖ್ಯಮಂತ್ರಿಗಳು,
- ಉಪ ಮುಖ್ಯಮಂತ್ರಿಗಳು.
- ಕಾರ್ಯಕ್ರಮ ನಡೆಯುವ ಸ್ಥಳದ ಜಿಲ್ಲೆಯ ಜಿಲ್ಲಾ ಉಸ್ತುವಾರಿ ಸಚಿವರು.
- ಕಾರ್ಯಕ್ರಮ ನಡೆಯುವ ಸ್ಥಳದ ಜಿಲ್ಲೆಯ ಇತರೆ ಸಚಿವರು
- ಕಾರ್ಯಕ್ರಮಕ್ಕೆ ಸಂಬಂಧಪಟ್ಟ ಇಲಾಖಾ ಸಚಿವರು,
- ವಿರೋಧ ಪಕ್ಷದ ನಾಯಕರು,
- ಕಾರ್ಯಕ್ರಮ ನಡೆಯುವ ಜಿಲ್ಲೆಯ ಸಂಸದರು (ಜಿಲ್ಲೆಯನ್ನು ನೋಡಲ್ ಜಿಲ್ಲೆಯನ್ನಾಗಿ ಆಯ್ಕೆ ಮಾಡಿಕೊಂಡಿರುವ ರಾಜ್ಯ ಸಭಾ ಸದಸ್ಯರು ಸೇರಿದಂತೆ).
- ಕಾರ್ಯಕ್ರಮ ಜರುಗುವ ಜಿಲ್ಲೆಯಲ್ಲಿನ ಎಲ್ಲಾ ಶಾಸಕರು (ಕಾರ್ಯಕ್ರಮ ನಡೆಯುವ ಸ್ಥಳದ ವ್ಯಾಪ್ತಿಯ ಶಾಸಕರ ಅಧ್ಯಕ್ಷತೆ).
- ಕಾರ್ಯಕ್ರಮದ ನಡೆಯುವ ಜಿಲ್ಲೆಯ ಪ್ರತಿನಿಧಿಸುವ ಪದವೀದರ ಕ್ಷೇತ್ರ, ಶಿಕ್ಷಕರ ಕ್ಷೇತ್ರ ಮತ್ತು ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳಿಂದ ಚುನಾಯಿತರಾಗಿರುವ ವಿಧಾನ ಪರಿಷತ್ತಿನ ಎಲ್ಲಾ ಶಾಸಕರುಗಳು ಮತ್ತು ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿಕೊಂಡಿರುವ ನಾಮ ನಿರ್ದೇಶಿತ ಹಾಗೂ ವಿಧಾನಸಭೆಯಿಂದ ಆಯ್ಕೆಯಾದ ವಿಧಾನ ಪರಿಷತ್ತಿನ ಶಾಸಕರುಗಳು.
- ನಿಗಮ ಮತ್ತು ಮಂಡಳಿಗಳ ಕಾರ್ಯಕ್ರಮಗಳಿಗೆ ಆಯಾ ನಿಗಮ ಮತ್ತು ಮಂಡಳಿಯ ಅಧ್ಯಕ್ಷರುಗಳನ್ನು ಆಹ್ವಾನಿಸುವುದು. ಜೊತೆಗೆ ಇತರೇ ಕಾರ್ಯಕ್ರಮಗಳಿಗೆ ಆಯಾ ಜಿಲ್ಲೆಗಳಿಂದ ನಿಗಮ ಮತ್ತು ಮಂಡಳಿಗಳಿಗೆ ಅಧ್ಯಕ್ಷರುಗಳಾಗಿರುವವರನ್ನು ಸಹ ಆಹ್ವಾನಿಸುವುದು.
- ಕಾರ್ಯಕ್ರಮ ನಡೆಯುವ ಸ್ಥಳದ ಜಿಲ್ಲಾ ಪಂಚಾಯತ್ ಅಧ್ಯಕ್ಷರು.
- ಕಾರ್ಯಕ್ರಮ ನಡೆಯುವ ಸ್ಥಳದ ತಾಲ್ಲೂಕು ಪಂಚಾಯತ್ ಅಧ್ಯಕ್ಷರು
- ಕಾರ್ಯಕ್ರಮ ನಡೆಯುವ ಸ್ಥಳದ ನಗರ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು/ ಮಹಾಪೌರರು ಅಥವಾ ಗ್ರಾಮ ಪಂಚಾಯಿತಿಯ ಅಧ್ಯಕ್ಷರು.

೯. ಕಂಡಿಕೆ ೮ರಲ್ಲಿ ನಮೂದಿಸಿದ ಜನಪ್ರತಿನಿಧಿ/ ಗಣ್ಯ ವ್ಯಕ್ತಿಗಳೊಂದಿಗೆ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಸಂದರ್ಭಗನುಗುಣವಾಗಿ ಈ ಕೆಳಕಂಡ ಜನಪ್ರತಿನಿಧಿಗಳನ್ನು ಸಹ ಆಹ್ವಾನಿಸತಕ್ಕದ್ದು.

(ಎ) ಜಿಲ್ಲಾ ಪಂಚಾಯತ್‌ಗೆ ಸಂಬಂಧಪಟ್ಟಂತಹ ಕಾರ್ಯಕ್ರಮಗಳಿಗೆ ಜಿಲ್ಲಾ ಪಂಚಾಯತ್‌ನ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಜಿಲ್ಲಾ ಪಂಚಾಯತ್ ಸದಸ್ಯರುಗಳನ್ನು ಆಹ್ವಾನಿಸುವುದು.

(ಬಿ) ಅದರಂತೆ ತಾಲ್ಲೂಕು ಪಂಚಾಯತ್‌ಗೆ ಸಂಬಂಧಪಟ್ಟಂತಹ ಕಾರ್ಯಕ್ರಮಗಳಿಗೆ ತಾಲ್ಲೂಕು ಪಂಚಾಯತ್‌ನ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ತಾಲ್ಲೂಕು ಪಂಚಾಯತ್ ಸದಸ್ಯರುಗಳನ್ನು ಆಹ್ವಾನಿಸುವುದು.



Scanned with CamScanner

(ಸಿ) ಅದರಂತೆ ಗ್ರಾಮ ಪಂಚಾಯತ್‌ಗೆ ಸಂಬಂಧಪಟ್ಟಂತಹ ಕಾರ್ಯಕ್ರಮಗಳಿಗೆ ಗ್ರಾಮ ಪಂಚಾಯತ್‌ನ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಗ್ರಾಮ ಪಂಚಾಯತ್ ಸದಸ್ಯರುಗಳನ್ನು ಆಹ್ವಾನಿಸುವುದು.

(ಡಿ) ಅದರಂತೆ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಪಟ್ಟಂತಹ ಕಾರ್ಯಕ್ರಮಗಳಿಗೆ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ನಗರ ಸ್ಥಳೀಯ ಸಂಸ್ಥೆಯ ಸದಸ್ಯರುಗಳನ್ನು ಆಹ್ವಾನಿಸುವುದು.

ಟಿಪ್ಪಣಿ:

ಮೇಲ್ಕಂಡ ಕಾರ್ಯಕ್ರಮಗಳಿಗೆ ಕಡ್ಡಾಯವಾಗಿ ಆಹ್ವಾನಿಸಬೇಕಾಗಿರುವ ಜನಪ್ರತಿನಿಧಿಗಳನ್ನು ಹೊರತುಪಡಿಸಿ, ಇತರೆ ಸಚಿವರು/ ಜನಪ್ರತಿನಿಧಿಗಳು/ ಗಣ್ಯ ವ್ಯಕ್ತಿಗಳನ್ನು ಆಹ್ವಾನಿಸಲು ಕಾರ್ಯಕ್ರಮದ ಸಂದರ್ಭಕ್ಕನುಗುಣವಾಗಿ ಆಯೋಜಕರು ತೀರ್ಮಾನ ತೆಗೆದುಕೊಳ್ಳತಕ್ಕದ್ದು.

## ಆಹ್ವಾನ ಪತ್ರಿಕೆ ಮುದ್ರಿಸುವ ಬಗ್ಗೆ :

10. ಸಮಾರಂಭದಲ್ಲಿ ಪಾಲ್ಗೊಳ್ಳುವಂತಹ ಸಂದರ್ಭ, ರಾಜ್ಯ ಆಧ್ಯತಾ ಸೂಚಿ ಪಟ್ಟಿ ಮತ್ತು ಇತರೆ ಸನ್ನಿವೇಶಗಳನ್ನು ಆದರಿಸಿ ಕೇಂದ್ರ ಸಚಿವರುಗಳು, ರಾಜ್ಯ ಸಂಪುಟ ದರ್ಜೆ ಸಚಿವರುಗಳು, ರಾಜ್ಯ ಸಚಿವರು, ಸಂಸತ್ ಮತ್ತು ರಾಜ್ಯ ವಿಧಾನ ಮಂಡಲಗಳ ಸದಸ್ಯರುಗಳಿಗೆ, ಘನ ಉಪಸ್ಥಿತಿ, ಉದ್ಘಾಟನೆ/ ಶಂಕುಸ್ಥಾಪನೆ/ಲೋಕಾರ್ಪಣೆ, ಅಧ್ಯಕ್ಷರು, ಮುಖ್ಯ ಅತಿಥಿಗಳು, ವಿಶೇಷ ಆಹ್ವಾನಿತರು ಹೀಗೆ ಸ್ಥಾನಗಳನ್ನು ನೀಡಬೇಕು. ಇದೇ ಅನುಕ್ರಮದಲ್ಲಿ ಆಹ್ವಾನ ಪತ್ರಿಕೆಯನ್ನು ಮುದ್ರಿಸತಕ್ಕದ್ದು.

11. ಸರ್ಕಾರದ ಕಾರ್ಯಕ್ರಮದ ಎಲ್ಲಾ ಆಹ್ವಾನ ಪತ್ರಿಕೆಗಳಲ್ಲಿ ಆಹ್ವಾನಿತರ ಹೆಸರುಗಳನ್ನು ರಾಜ್ಯ ಆಧ್ಯತಾ ಸೂಚಿಪಟ್ಟಿಗೆ ಅನುಗುಣವಾಗಿಯೇ ಮುದ್ರಿಸಬೇಕು. ಈ ಆದ್ಯತಾಸೂಚಿ ಪಟ್ಟಿಯನ್ನು ಪರಿಗಣಿಸುವಾಗ ಜನಪ್ರತಿನಿಧಿಗಳು ಹೊಂದಿರುವ ಸ್ಥಾನಮಾನವನ್ನು ಪರಿಗಣನೆಗೆ ತೆಗೆದುಕೊಳ್ಳಬೇಕು. ಆದರೆ, ರಾಜ್ಯ ಆದ್ಯತಾ ಸೂಚಿ ಪಟ್ಟಿಯ ಟಿಪ್ಪಣಿ 6(ಎ) ರಲ್ಲಿ ತಿಳಿಸಿರುವಂತೆ ಕಾರ್ಯಕ್ರಮದ ಅಧ್ಯಕ್ಷ ಸ್ಥಾನವನ್ನು ಆಹ್ವಾನ ಪತ್ರಿಕೆಯಲ್ಲಿ ಘನ ಉಪಸ್ಥಿತಿ, ಉದ್ಘಾಟನೆ/ ಶಂಕುಸ್ಥಾಪನೆ/ಲೋಕಾರ್ಪಣೆಯ ನಂತರ ನಮೂದಿಸುವುದು.

ಟಿಪ್ಪಣಿ

**ಅ) ಸರ್ಕಾರದ ಕಾರ್ಯಕ್ರಮಗಳಿಗೆ ಕಡ್ಡಾಯವಾಗಿ ಅಹ್ವಾನಿಸಬೇಕಾದ ಮತ್ತು ಕರ್ನಾಟಕ ರಾಜ್ಯದ ಆಧ್ಯತಾ ಸೂಚಿ ಪಟ್ಟಿಯಲ್ಲಿ ಯಾವುದೇ ಸ್ಥಾನಮಾನವನ್ನು ಹೊಂದದೇ ಇರುವ ಜನಪ್ರತಿನಿಧಿಗಳನ್ನು/ಗಣ್ಯ ವ್ಯಕ್ತಿಗಳನ್ನು ಅಹ್ವಾನ ಪತ್ರಿಕೆಯಲ್ಲಿ ಕೊನೆಯ ಶಾಸಕರ ನಂತರ ಈ ಕೆಳಗಿನ ಆಧ್ಯತೆಯಂತೆ ನಮೂದಿಸಲು ಕ್ರಮಕೈಗೊಳ್ಳತಕ್ಕದ್ದು.**

**i. ಶಾಸಕರಲ್ಲದ ಮತ್ತು ಸಚಿವ ಸ್ಥಾನಮಾನ ಹೊಂದದೇ ಇರುವ ರಾಜ್ಯ ಮಟ್ಟದ ಇತರೆ ನಿಗಮ ಮತ್ತು ಮಂಡಳಿಗಳ ಅಧ್ಯಕ್ಷರುಗಳು.**



Scanned with CamScanner

- ಒಂದಕ್ಕಿಂತ ಹೆಚ್ಚಿಗೆ ನಿಗಮ ಮತ್ತು ಮಂಡಳಿಗಳ ಅಧ್ಯಕ್ಷರುಗಳು ಇದ್ದಲ್ಲಿ, ಆಯಾ ಅಧ್ಯಕ್ಷರುಗಳು ಆ ಹುದ್ದೆಗೆ ಸೇರಿದ ದಿನಾಂಕವನ್ನು ಪರಿಗಣನೆಗೆ ತೆಗೆದುಕೊಂಡು ಪರಸ್ಪರ ಆದ್ಯತೆ ನಿಗದಿಪಡಿಸುವುದು.

ii. ಕಾರ್ಯಕ್ರಮ ನಡೆಯುವ ಸ್ಥಳದ ಮಹಾನಗರಪಾಲಿಕೆಯ ಮಹಾಪೌರರು.

iii. ಕಾರ್ಯಕ್ರಮ ನಡೆಯುವ ಸ್ಥಳದ ತಾಲ್ಲೂಕ್ ಪಂಚಾಯತ್ ಅಧ್ಯಕ್ಷರು..

iv. ಕಾರ್ಯಕ್ರಮ ನಡೆಯುವ ಸ್ಥಳದ ನಗರ ಸ್ಥಳೀಯ ಸಂಸ್ಥೆಯ/ಗ್ರಾಮ ಪಂಚಾಯತಿನ ಅಧ್ಯಕ್ಷರು.

ಆ) ಸರ್ಕಾರದ ಕಾರ್ಯಕ್ರಮಗಳಿಗೆ ಕಡ್ಡಾಯವಾಗಿ ಅಹ್ವಾನಿಸಬೇಕಾದ ಜನಪ್ರತಿನಿಧಿಗಳನ್ನು ಹೊರತುಪಡಿಸಿ ಇತರೆ ಜನಪ್ರತಿನಿಧಿಗಳನ್ನು ಮತ್ತು ಗಣ್ಯವ್ಯಕ್ತಿಗಳನ್ನು ಅಹ್ವಾನಿಸಿದಾಗ,

i. ಈಗಾಗಲೇ ಅವರಿಗೆ ಕರ್ನಾಟಕ ರಾಜ್ಯದ ಆಧ್ಯತಾ ಸೂಚಿಪಟ್ಟಿಯಲ್ಲಿ ಸ್ಥಾನಮಾನ ನೀಡಿದ್ದರೆ ಅವರ ಹೆಸರುಗಳನ್ನು ಆ ಪ್ರಕಾರ ಅಹ್ವಾನ ಪತ್ರಿಕೆಗಳಲ್ಲಿ ನಮೂದಿಸಿವುದು.

ii. ಅವರಿಗೆ ಯಾವುದೇ ಸ್ಥಾನಮಾನವಿಲ್ಲದಿದ್ದಾಗ ಅವರ ಹೆಸರುಗಳನ್ನು ಕಡ್ಡಾಯವಾಗಿ ಅಹ್ವಾನಿಸಬೇಕಾದ ಎಲ್ಲಾ ಜನಪ್ರತಿನಿಧಿಗಳ ನಂತರ ಅವರ ಹೆಸರುಗಳನ್ನು ನಮೂದಿಸುವುದು.

12. 2018 ರ ಆದ್ಯತಾ ಸೂಚಿಪಟ್ಟಿಯ ಪ್ರಕಾರ ಲೋಕಸಭಾ ಸದಸ್ಯರು ಮತ್ತು ರಾಜ್ಯಸಭಾ ಸದಸ್ಯರು ಕ್ರಮ ಸಂಖ್ಯೆ:21 ಅನುಚ್ಛೇದದಲ್ಲಿ ಹಾಗೂ ವಿಧಾನಸಭಾ ಸದಸ್ಯರು ಮತ್ತು ವಿಧಾನ ಪರಿಷತ್ ಸದಸ್ಯರುಗಳು ಕ್ರಮ ಸಂಖ್ಯೆ:21 (ಎ) ಅನುಚ್ಛೇದದಲ್ಲಿ ಸ್ಥಾನವನ್ನು ಪಡೆಯುತ್ತಾರೆ. ಭಾರತ ಸರ್ಕಾರದ ಗೃಹ ಮಂತ್ರಾಲಯವು "as per the practice the person who has served more than one term continuously are placed higher in the Table of Precedence (ToP)" ಎಂದು ಅಭಿಪ್ರಾಯಿಸಿರುವ ಹಿನ್ನೆಲೆಯಲ್ಲಿ ಆದ್ಯತಾಸೂಚಿ ಪಟ್ಟಿಯಲ್ಲಿ ಒಂದೇ ಅನುಚ್ಛೇದದಲ್ಲಿರುವ ಹುದ್ದೆಗಳ ನಡುವೆ ಆದ್ಯತೆ ನೀಡುವಾಗ ಲೋಕಸಭಾ ಸದಸ್ಯರ ನಂತರ ರಾಜ್ಯಸಭಾ ಸದಸ್ಯರು ಹಾಗೂ ವಿಧಾನ ಸಭಾ ಸದಸ್ಯರ ನಂತರ ವಿಧಾನ ಪರಿಷತ್ತು ಸದಸ್ಯರು ಎಂಬ ಎರಡು ವಿಂಗಡನೆಗಳಾಗಿ ಮಾಡಿಕೊಳ್ಳದೇ ಯಾವ ವ್ಯಕ್ತಿಗಳು ಒಂದಕ್ಕಿಂತ ಹೆಚ್ಚು ಅವಧಿಗೆ ಸತತವಾಗಿ ಅದೇ ಸ್ಥಾನದಲ್ಲಿ ಮುಂದುವರೆದಿರುತ್ತಾರೋ ಅಂತಹವರಿಗೆ ಪರಸ್ಪರ ಆದ್ಯತೆಯನ್ನು ನಿಗದಿಪಡಿಸುವಾಗ ಮೇಲಿನ ಸ್ಥಾನವನ್ನು ನಿಗದಿಪಡಿಸುವುದು.

**ಟಿಪ್ಪಣಿ**

**ಜಿಲ್ಲಾ ಮಟ್ಟದ ಹಾಗೂ ರಾಜ್ಯ ಮಟ್ಟದ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಕಾರ್ಯಕ್ರಮ ನಡೆಯುವ ಸ್ಥಳದ ಲೋಕಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ಸಂಸದರನ್ನು ಮೊದಲಿಗೆ ಹಾಕುವುದು. ತದನಂತರ ಉಳಿದ ಸಂಸದರುಗಳನ್ನು (ಲೋಕಸಭಾ ಮತ್ತು ರಾಜ್ಯ ಸಭಾ ಸಂಸದರನ್ನೊಳಗೊಂಡಂತೆ) ಆದ್ಯತಾ ಪಟ್ಟಿಯ ಪ್ರಕಾರ ನಮೂದು ಮಾಡುವುದು.**



Scanned with CamScanner

13. ಸರ್ಕಾರದ ಸಮಾರಂಭಗಳ ಆಮಂತ್ರಣ ಪತ್ರಿಕೆಯಲ್ಲಿ ವಿಧಾನ ಪರಿಷತ್ತು ಮತ್ತು ವಿಧಾನ ಸಭೆಯ ಸದಸ್ಯರ ಹೆಸರುಗಳನ್ನು ನಮೂದು ಮಾಡುವ ಸಂದರ್ಭಗಳಲ್ಲಿ "ಶಾಸಕರು (ವಿಧಾನ ಪರಿಷತ್ತು) ಮತ್ತು ಶಾಸಕರು (ವಿಧಾನ ಸಭೆ) ಎಂದು ಹಾಗೂ ಲೋಕಸಭಾ ಸದಸ್ಯರ ಮತ್ತು ರಾಜ್ಯಸಭಾ ಸದಸ್ಯರ ಹೆಸರುಗಳನ್ನು ನಮೂದು ಮಾಡುವ ಸಂದರ್ಭಗಳಲ್ಲಿ ಸಂಸದರು ( ಲೋಕಸಭೆ) ಮತ್ತು ಸಂಸದರು (ರಾಜ್ಯಸಭೆ) ಎಂದು ನಮೂದು ಮಾಡುವುದು

14. ಜಿಲ್ಲೆಯಲ್ಲಿ ಯಾವುದೇ ಸರ್ಕಾರಿ ಸಮಾರಂಭ ಏರ್ಪಡಿಸುವ ಮುನ್ನ ಆಹ್ವಾನ ಪತ್ರಿಕೆಗೆ ಆಯಾ ಜಿಲ್ಲಾಧಿಕಾರಿಗಳ / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಪಡೆಯಬೇಕು

15. ಸರ್ಕಾರದ ಸಮಾರಂಭವನ್ನು ಏರ್ಪಡಿಸುವ ಎಲ್ಲಾ ಇಲಾಖಾ ಮುಖ್ಯಸ್ಥರು ಮತ್ತು ಜಿಲ್ಲಾಧಿಕಾರಿಗಳು ಸಂಸತ್ತಿನ ಹಾಗೂ ರಾಜ್ಯ ವಿಧಾನ ಮಂಡಲದ ಸದಸ್ಯರುಗಳಿಗೆ ತಪ್ಪದೇ ಆಹ್ವಾನ ಪತ್ರಿಕೆಗಳನ್ನು ಕಳುಹಿಸುವ ವ್ಯವಸ್ಥೆ ಮಾಡತಕ್ಕದ್ದಲ್ಲದೇ, ಇಲಾಖೆಯ ಹಿರಿಯ ಅಧಿಕಾರಿಗಳ ಮುಖಾಂತರ ಅವರುಗಳಿಗೆ ಆಹ್ವಾನ ಪತ್ರಿಕೆಗಳನ್ನು ಖುದ್ದಾಗಿ ತಲುಪಿಸಲು ಏರ್ಪಾಡು ಮಾಡಬೇಕು.

16 ಆಹ್ವಾನ ಪತ್ರಿಕೆಗಳನ್ನು ಮುದ್ರಿಸದಿದ್ದ ಪಕ್ಷದಲ್ಲಿ ಕನಿಷ್ಠ ಪಕ್ಷ ಪತ್ರದ ಮುಖೇನ ಅನೌಪಚಾರಿಕವಾಗಿ ಜವಾಬ್ದಾರಿಯುತ ಅಧಿಕಾರಿಗಳ ಮುಖಾಂತರ ಸಂಸತ್ ಸದಸ್ಯರುಗಳನ್ನು ರಾಜ್ಯ ವಿಧಾನ ಮಂಡಲದ ಸದಸ್ಯರನ್ನು ಹಾಗೂ ಇತರರನ್ನು ಸಮಾರಂಭಕ್ಕೆ ಆಹ್ವಾನಿಸಬೇಕು.

17 ಶಂಕುಸ್ಥಾಪನೆ / ಉದ್ಘಾಟನೆ ಇತ್ಯಾದಿಗಳಿಗೆ ಸಂಬಂಧಪಟ್ಟ ಶಿಲೆಗಳಲ್ಲೂ ಸಹ ಆಹ್ವಾನ ಪತ್ರಿಕೆಯಲ್ಲಿರುವ ಹೆಸರುಗಳನ್ನು ಅದೇ ಆದ್ಯತೆಯಲ್ಲಿ ನಮೂದಿಸಬೇಕು.

## ಆಸನ ವ್ಯವಸ್ಥೆ

18. ಆಸನ ವ್ಯವಸ್ಥೆ ಮಾಡುವಾಗಲೂ ರಾಜ್ಯ ಆದ್ಯತಾ ಪಟ್ಟಿಯ ಪ್ರಕಾರವೇ ಗಣ್ಯರಿಗೆ ಸಲ್ಲಬೇಕಾದ ಸ್ಥಾನಮಾನಗಳನ್ನು ಆಯಾ ವರಿಷ್ಠರಿಗೆ ತಪ್ಪದೇ ಸಲ್ಲಿಸಬೇಕು. ಆದ್ದರಿಂದ ಆಹ್ವಾನ ಪತ್ರಿಕೆಯನ್ನು ಆದ್ಯತಾಪಟ್ಟಿಯ ಮೇರೆಗೆ ಮುದ್ರಿಸುವುದರಿಂದ ಆಸನ ವ್ಯವಸ್ಥೆಯನ್ನು ಆಹ್ವಾನ ಪತ್ರಿಕೆಯ ಅನುಗುಣವಾಗಿ ಮಾಡುವುದು.

19 ಸಾಮಾನ್ಯವಾಗಿ ಶಿಷ್ಟಾಚಾರದಂತೆ ಅನುಸರಿಸಬೇಕಾದ ಆಸನ ವ್ಯವಸ್ಥೆಯನ್ನು ಕೆಳಕಂಡಂತೆ ನೀಡಲಾಗಿದೆ.

| | | | | | | | | | | |
|---|---|---|---|---|---|---|---|---|---|---|
| 10 | 8 | 6 | 4 | 2 | 1 | 3 | 5 | 7 | 9 | 11 |

ಮೇಲ್ಕಂಡಂತೆ ಕಾರ್ಯಕ್ರಮದ ಆಹ್ವಾನ ಪತ್ರಿಕೆಯ ಪ್ರಕಾರ ಮೊದಲಿಗರೋ ಯಾರೋ ಅವರನ್ನು ಮಧ್ಯದಲ್ಲಿ (ಆಸನ ಸಂಖ್ಯೆ: 1) ಕೂರಿಸಬೇಕು ಅವರ ನಂತರ ಆಹ್ವಾನ ಪತ್ರಿಕೆಯ ಅನುಗುಣವಾಗಿ ಉಳಿದ ಗಣ್ಯರನ್ನು ಬಲ ಮತ್ತು ಎಡ ಭಾಗದಲ್ಲಿ ಮೇಲ್ಕಂಡಂತೆ ಆಸನ ವ್ಯವಸ್ಥೆಯನ್ನು ಮಾಡಬೇಕು.

20. ಕಾರ್ಯಕ್ರಮಗಳಿಗೆ ತಡವಾಗಿ ಬರುವ ಸಂಸತ್ ಹಾಗೂ ರಾಜ್ಯ ವಿಧಾನ ಮಂಡಲದ ಸದಸ್ಯರಿಗೆ



Scanned with CamScanner

ಆಗುವ ಅನಾನುಕೂಲತೆಗಳನ್ನು ನಿವಾರಿಸುವ ಸಲುವಾಗಿ ಅವರಿಗಾಗಿ ಪ್ರತ್ಯೇಕವಾಗಿರಿಸಿದ ಆಸನಗಳನ್ನು ಸಮಾರಂಭ ಮುಗಿಯುವವರೆಗೂ ಕಾದಿರಿಸತಕ್ಕದ್ದು. ಹಾಗೂ ಆ ಆಸನಗಳು ಖಾಲಿಯಿದ್ದಾಗ್ಯೂ ಅವುಗಳನ್ನು ಇತರರು ಉಪಯೋಗಿಸಿಕೊಳ್ಳತಕ್ಕದಲ್ಲ.

21. ಸರ್ಕಾರಿ ಅಧಿಕಾರಿಗಳು ಸಾಮಾನ್ಯವಾಗಿ ಯಾವುದೇ ಸರ್ಕಾರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸುವುದು ಮತ್ತು ಉದ್ಘಾಟಿಸುವುದನ್ನು ನಿಷೇಧಿಸಿದೆ. ಆದರೆ, ಅನಿವಾರ್ಯ ಸಂದರ್ಭಗಳಲ್ಲಿ ಅಂದರೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹೊರತುಪಡಿಸಿ, ಇನ್ನಿತರ ಸರ್ಕಾರಿ ಕಾರ್ಯಕ್ರಮಗಳಾದ ಜಯಂತಿ/ ಉತ್ಸವ/ ಅರಿವು ಮೂಡಿಸುವ ಕಾರ್ಯಕ್ರಮಗಳಲ್ಲಿ ಆಹ್ವಾನ ಪತ್ರಿಕೆಯಲ್ಲಿ ನಮೂದಿಸಿದ ಯಾವುದೇ ಜನಪ್ರತಿನಿಧಿಗಳು ಕಾರ್ಯಕ್ರಮಕ್ಕೆ ಹಾಜರಾಗದೇ ಇದ್ದ ಸಂದರ್ಭದಲ್ಲಿ ಮಾತ್ರ ಅಧ್ಯಕ್ಷತೆ ವಹಿಸಬಹುದು ಮತ್ತು ಉದ್ಘಾಟನೆ ಮಾಡಬಹುದು ಮತ್ತು ಅವಶ್ಯಕತೆಗೆ ಅನುಗುಣವಾಗಿ ಸಂಬಂಧಪಟ್ಟ ಅಧಿಕಾರಿಗಳು ಕಾರ್ಯಕ್ರಮದ ವೇದಿಕೆ ಮೇಲೆ ಉಪಸ್ಥಿತರಿರಬಹುದು.

**<u>ವಿಶೇಷ ಸೂಚನೆಗಳು:</u>**

22. ನ್ಯಾಯಾಲಯಗಳಿಗೆ ಸಂಬಂಧಿಸಿದ ಕಾರ್ಯಕ್ರಮಗಳಿಗೆ ಕುರಿತಾಗಿ ಮಾನ್ಯ ಉಚ್ಛ ನ್ಯಾಯಾಲಯದ ನಿರ್ದೇಶನದನ್ವಯ ಕ್ರಮವನ್ನು ಕೈಗೊಳ್ಳುವುದು.

23 ಮಾನ್ಯ ರಾಷ್ಟ್ರಪತಿಗಳು, ಉಪರಾಷ್ಟ್ರಪತಿಗಳು ಮತ್ತು ಪ್ರಧಾನ ಮಂತ್ರಿಗಳು ಭಾಗವಹಿಸುವ ಕಾರ್ಯಕ್ರಮಗಳನ್ನು ಮಾನ್ಯ ರಾಷ್ಟ್ರಪತಿಗಳು, ಉಪರಾಷ್ಟ್ರಪತಿಗಳು ಮತ್ತು ಪ್ರಧಾನ ಮಂತ್ರಿಗಳ ಕಾರ್ಯಾಲಯದ ಅನುಮೋದನೆಯಂತೆ ನಡೆಸುವುದು.

24. ಕೇಂದ್ರ ಸರ್ಕಾರದ ಸಮಾರಂಭಗಳಿಗೆ ಸಂಸತ್ತು ಸದಸ್ಯರನ್ನು ಆಹ್ವಾನಿಸುವ ರೀತಿಯಲ್ಲಿಯೇ ಸ್ಥಳೀಯ ಚುನಾಯಿತ ಪ್ರತಿನಿಧಿಗಳಾದ ವಿಧಾನಮಂಡಲದ ಸದಸ್ಯರುಗಳನ್ನು ಶಿಷ್ಟಾಚಾರದನ್ವಯ ತಪ್ಪದೇ ಆಹ್ವಾನಿಸುವುದು.

25 ಗಣರಾಜ್ಯೋತ್ಸವ ಹಾಗೂ ಸ್ವಾತಂತ್ರ್ಯ ದಿನಾಚರಣೆ ದಿನಗಳಂದು ಯಾರು ಧ್ವಜಾರೋಹಣ ಮಾಡಬೇಕು ಎನ್ನುವ ಬಗ್ಗೆ ಭಾರತ ಸರ್ಕಾರ ಹೊರಡಿಸಿದ ಸುತ್ತೋಲೆಗಳಲ್ಲಿ ನೀಡಲಾದ ನಿರ್ದೇಶನವನ್ನು ಮುಂದುವರೆಸಿಕೊಂಡು ಹೋಗುವುದು.

26. ಸರ್ಕಾರಿ ಆದೇಶಗಳಲ್ಲಿ ಶಾಸಕರು ಅಥವಾ ಖಾಸಗಿ ಪ್ರಮುಖರ ಅಧ್ಯಕ್ಷತೆಯಲ್ಲಿ ಹಲವು ಸಮಿತಿಗಳನ್ನು ನೇಮಕ ಮಾಡಲಾಗಿದೆ. ಆಯಾ ಸಮಿತಿಯ ಕಾರ್ಯವ್ಯಾಪ್ತಿಗೆ ಒಳಪಟ್ಟು ಸಮೀಕ್ಷಣಾ ಸಭೆಗಳನ್ನು ನಡೆಸಬಹುದು. ಇದನ್ನು ಹೊರತುಪಡಿಸಿ ಶಾಸಕರೇ ಆಗಲೀ ಇತರೇ ಖಾಸಗಿ ಪ್ರಮುಖರೇ ಆಗಲೀ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸಮೀಕ್ಷಣಾ ಸಭೆಗಳನ್ನು ನಡೆಸುವಂತಿಲ್ಲ. ವಿರೋಧ ಪಕ್ಷದ ನಾಯಕರಿಗೂ ಸಹ ಅಧಿಕಾರಿಗಳ ಸಭೆ ಕರೆಯಲು ಅವಕಾಶವಿರುವುದಿಲ್ಲ ಆದರೆ ಅಗತ್ಯ ಮಾಹಿತಿಯನ್ನು ಸೂಕ್ತವಾಗಿ ಒದಗಿಸಬಹುದಾಗಿದೆ. ಅಂತಹ ಸಭೆಗಳನ್ನು ನಡೆಸಲು ಮಾನ್ಯ ಸಚಿವರು ಮತ್ತು ಅಧಿಕಾರಿಗಳಿಗೆ ಮಾತ್ರ ಅವಕಾಶವಿರುತ್ತದೆ.



Scanned with CamScanner

27. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಮ್ಮ ಹಂತದಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಶಿಷ್ಟಾಚಾರದ ಬಗ್ಗೆ ಪೂರ್ಣವಾಗಿ ತರಬೇತಿ ನೀಡುವುದು. ಶಿಷ್ಟಾಚಾರ ಲೋಪವಾದ ಪ್ರಕರಣಗಳಲ್ಲಿ ಸಂಬಂಧಪಟ್ಟವರ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೆಂದು ಸಂಬಂಧಪಟ್ಟವರಿಗೆಲ್ಲ ತಿಳಿಸತಕ್ಕದ್ದು. ಸಂಬಂಧಪಟ್ಟ ಅಧಿಕಾರಿಗಳಲ್ಲದೇ, ಶಿಷ್ಟಾಚಾರ ಪಾಲಿಸುವುದರಲ್ಲಿ ವಿಫಲರಾದ ಹಿರಿಯ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಈ ಮೂಲಕ ಸೂಚಿಸಿದೆ.

(signature)

ಸರ್ಕಾರದ ಮುಖ್ಯ ಕಾರ್ಯದರ್ಶಿ

**ಪ್ರತಿಗಳು:**

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3) ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
4) ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
5) ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ.
6) ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್.
7) ಎಲ್ಲಾ ವಿಭಾಗಾಧಿಕಾರಿಗಳು.
8) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9) ಎಲ್ಲಾ ಜಿಲ್ಲಾಧಿಕಾರಿಗಳು.
10) ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11) ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿಗಳು.
12) ಪತ್ರಿಕಾ ಪ್ರಕಟಣೆ / ಹೆಚ್ಚುವರಿ ಪ್ರತಿಗಳು.

**ಮಾಹಿತಿಗಾಗಿ:**

1) ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸು ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ರಾಜಕೀಯ)

Scanned with CamScanner